## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಧ್ಯಕ್ಷರು, ಮೈಸೂರು ಜಿಲ್ಲಾ ಪಂಚಾಯತ್ ಇವರ ಉಪಯೋಗಕ್ಕಾಗಿ ಹೊಸ ವಾಹನ ಖರೀದಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರ ಪತ್ರ ಸಂಖ್ಯೆ; ಎಡಿಎಂ (1)/137/2010-11 ದಿನಾಂಕ 20.11.2014.

:-:

**ಪ್ರಸ್ತಾವನೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರು ಮೇಲೆ ಓದಲಾದ ದಿನಾಂಕ 20.11.2014 ರ ಪತ್ರದಲ್ಲಿ ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ ಮೈಸೂರು ಇವರ ಉಪಯೋಗಕ್ಕಾಗಿ, ಬಳಸುತ್ತಿರುವ ವಾಹನ ಸಂಖ್ಯೆ: ಕೆಎ 09 ಜಿ 685 ಅನುಪಯುಕ್ತವಾಗಿರುವ ಕಾರಣ ಹೊಸ ವಾಹನ – ಟೊಯೋಟಾ ಇನ್ನೋವಾ ಕಾರನ್ನು ಖರೀದಿಸಲು ಹಾಗೂ ಸದರಿ ವೆಚ್ಚವನ್ನು ಜಿಲ್ಲಾ ಪಂಚಾಯತ್ ಲೆಕ್ಕ ಶೀರ್ಷಿಕೆ 2059-00-101-0-29-200 ರ ಅಡಿಯಲ್ಲಿ ಭರಿಸಲು ಸರ್ಕಾರದ ಅನುಮತಿಯನ್ನು ಕೋರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 385 ಕೆಎಸ್‌ಎಸ್ 2014 ಬೆಂಗಳೂರು.**
**ದಿನಾಂಕ 22.01.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮೈಸೂರು ಜಿಲ್ಲಾ ಪಂಚಾಯತ್ ಅಧ್ಯಕ್ಷರ ಉಪಯೋಗಕ್ಕಾಗಿ ಹೊಸ ವಾಹನವನ್ನು ಲೆಕ್ಕ ಶೀರ್ಷಿಕೆ 2059-00-101-0-29ರ ಅಡಿಯಲ್ಲಿ ಲಭ್ಯವಿರುವ ಅನುದಾನದಲ್ಲಿ ವೆಚ್ಚವನ್ನು ಭರಿಸಿ ಖರೀದಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿದೆ.

1. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 174 ಶಿವಾನಿ 2007 ದಿನಾಂಕ 12.05.2008 ರಲ್ಲಿ ನಿಗದಿಪಡಿಸಿರುವ ರೂ. 6.50 ಲಕ್ಷಗಳ (ಆರು ಲಕ್ಷದ ಐವತ್ತು ಸಾವಿರ ರೂ.ಗಳು ಮಾತ್ರ) (ತೆರಿಗೆ ಹೊರತುಪಡಿಸಿ) ಮಿತಿಯೊಳಗೆ ಖರೀದಿಸುವುದು.
2. ಹಳೆಯ ವಾಹನವನ್ನು ನಿಯಮಾನುಸಾರ ವಿಲೇವಾರಿ ಮಾಡಿ ಅದರಿಂದ ಬರುವ ಮೌಲ್ಯವನ್ನು ಸರ್ಕಾರಿ ಲೆಕ್ಕ ಶೀರ್ಷಿಕೆಗೆ ಜಮಾ ಮಾಡುವುದು.

. . 2 . .

3. ಸದರಿ ಹೊಸ ವಾಹನ ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ ಹಾಗೂ ಅದರಡಿ ರಚಿಸಿರುವ ನಿಯಮಗಳನ್ನು ಪಾಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 358 ವೆಚ್ಚ-6/2014 ದಿನಾಂಕ 19.1.2015ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ನಾಗರಾಜ್ ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು
3. ಖಜಾನಾಧಿಕಾರಿ, ಜಿಲ್ಲಾ ಖಜಾನೆ, ಮೈಸೂರು
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು
6. ಅಪರ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
7. ಮೇಲ್ವಿಚಾರಕರು, ಗಣಕ ಕೋಶ, ಗ್ರಾಅ ಮತ್ತು ಪಂ.ರಾಜ್ ಇಲಾಖೆ.
8. ಮಾಹಿತಿ ಕೇಂದ್ರ/ ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.